# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.01 | Issue. 288 | Pages. 2 | Date: 08-10-2025, WEDNESDAY    RNI NO: KARKAN/2024/89601    Kannada Daily

ಸಂಪುಟ : 01 – ಸಂಚಿಕೆ : 288 – ಪುಟಗಳು : 2    08-10-2025 ಬುಧವಾರ    Ph: 8762954248    ದರ : ₹1


# ಹಾಸನಾಂಬ ಜಾತ್ರೆಗೆ ಅಂತಿಮ ಹಂತದ ಸಿದ್ಧತೆ

## ಮುಜರಾಯಿ ಸಚಿವರಿಂದ ಪರಿಶೀಲನೆ | ಗರ್ಭಗುಡಿ ಬಾಗಿಲು ತೆರೆಯಲು ಕ್ಷಣಗಣನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಧಿದೇವತೆ ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ಅಂತಿಮ ಹಂತದ ಸಿದ್ಧತೆಗಳು ನಡೆಯುತ್ತಿದ್ದು ನಗರ ಮದುವಣಗಿತ್ತಿಯಂತೆ ಸಿಂಗಾರಗೊಂಡಿದೆ. ಈಗಾಗಲೇ ಶೇ. 90 ರಷ್ಟು ಸಿದ್ಧತಾ ಕಾರ್ಯಗಳು ಪೂರ್ಣಗೊಂಡಿವೆ.

ಅ.9 ರಿಂದ 23ರ ವರೆಗೆ ಜಾತ್ರೆ ನೆರವೇರಲಿದ್ದು ಈ ಬಾರಿ 25 ಲಕ್ಷ ಜನರು ದೇವಿ ದರ್ಶನಕ್ಕೆ ಬರುವ ನಿರೀಕ್ಷೆಯಿದೆ. ಹೀಗಾಗಿ ಯಾವ ತೊಂದರೆಯೂ ಆಗದಂತೆ ಜಿಲ್ಲಾಡಳಿತ ಎಲ್ಲಾ ಕ್ರಮ ಕೈಗೊಂಡಿದೆ. ಗುರುವಾರ ಮಧ್ಯಾಹ್ನ 12.30ಕ್ಕೆ ದೇವಾಲಯ ಗರ್ಭಗುಡಿ ಬಾಗಿಲು ಶಾಸ್ತ್ರೋಕ್ತವಾಗಿ ತೆರೆಯಲಿದೆ. ಮೊದಲ ದಿನ ಗರ್ಭಗುಡಿ ಸ್ವಚ್ಛತೆ ಮತ್ತು ಅಲಂಕಾರ ಮಾಡುವ ಹಿನ್ನಲೆಯಲ್ಲಿ ಸಾರ್ವಜನಿಕ ಪ್ರವೇಶ ನಿಷೇಧಿಸಲಾಗಿದೆ. ಉಳಿದಂತೆ ನೈವೇದ್ಯ ಸಮಯ ಹೊರತುಪಡಿಸಿ ಭಕ್ತರಿಗೆ ಅವಕಾಶ ಕಲ್ಪಿಸಲಾಗುತ್ತದೆ. ಕೊನೆಯ ದಿನವಾದ



ಅ. 23 ರಂದು ಸಾರ್ವಜನಿಕ ದರ್ಶನ ಇರುವುದಿಲ್ಲ.

ಮಂಗಳವಾರ ದೇವಾಲಯಕ್ಕೆ ಭೇಟಿ ನೀಡಿದ್ದ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಅವರು ಅಂತಿಮ ಹಂತದ ಸಿದ್ಧತೆಗಳನ್ನು ಪರಿಶೀಲಿಸಿದರು. ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಮೊಹಮ್ಮದ್ ಸುಜೀತಾ, ದೇವಾಲಯ ಆಡಳಿತಾಧಿಕಾರಿ




ಮಾರುತಿ ಅವರು ಸಚಿವರಿಗೆ ಮಾಹಿತಿ ನೀಡಿದರು. ನಂತರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾ ಪಂಚಾಯಿತಿ, ಪೊಲೀಸ್ ಅಧಿಕಾರಿಗಳೊಂದಿಗೆ ಸಚಿವರು ಸಭೆ ನಡೆಸಿ ನಿರ್ದೇಶನ ನೀಡಿದರು. ದಕ್ಷಿಣ ವಲಯ ಡಿಐಜಿ ಬೋರಲಿಂಗಯ್ಯ ಸಿದ್ಧತೆ ಪರಿಶೀಲಿಸಿದರು.

### ಮೈಸೂರು ದಸರಾ ಮಾದರಿ ಕಾರ್ಯಕ್ರಮ

ಹಾಸನಾಂಬ ಜಾತ್ರಾ ಮಹೋತ್ಸವ ಅಂಗವಾಗಿ ಮೈಸೂರು ದಸರಾ ಮಾದರಿಯಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಜಾನಪದ ಜಾತ್ರೆ, ಫಲಪುಷ್ಪ ಪ್ರದರ್ಶನ, ಶ್ವಾನ ಪ್ರದರ್ಶನ, ಆಹಾರ ಮೇಳ ಸೇರಿ ಹಲವು ವಿಶೇಷ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದೆ.

ದೇವಿ ದರ್ಶನಕ್ಕೆ ಸರದಿ ಸಾಲಿನಲ್ಲಿ ಬರುವ ಭಕ್ತರಿಗೆ ತೊಂದರೆಯಾಗದಂತೆ ಮಳೆ-ಬಿಸಿಲಿನಿಂದ ಆಶ್ರಯ ಪಡೆಯಲು ಜರ್ಮನ್ ಟೆಂಟ್ ನಿರ್ಮಾಣ, ವಾರ್ ರೂಂ, ಬ್ಯಾರಿಕೇಡ್, ಫ್ಯಾನ್, ಮ್ಯಾಟ್, ತಾತ್ಕಾಲಿಕ ಶೌಚಾಲಯ, ಕುಡಿಯುವ ನೀರು ವ್ಯವಸ್ಥೆ ಕಲ್ಪಿಸಲಾಗಿದೆ. ಇದೇ ಮೊದಲ ಬಾರಿಗೆ ಹಾಸನಾಂಬ ದೇವಾಲಯದಲ್ಲಿ ಎಸಿ ಅಳವಡಿಸಲಾಗಿದೆ. ಇಡೀ ನಗರವನ್ನು ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿದ್ದು ದೇವಾಲಯದ ಆವರಣದಲ್ಲಿ ಆಕರ್ಷಕ ಹೂವಿನ ಅಲಂಕಾರ ಮಾಡಲಾಗುತ್ತಿದೆ.

### 1,500 ಪೊಲೀಸರ ನಿಯೋಜನೆ

ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಮೊಹಮ್ಮದ್ ಸುಜೀತಾ ಅವರು ಮಾತನಾಡಿ, ಭದ್ರತೆಗಾಗಿ ಇಬ್ಬರು ಎಸ್ಪಿಗಳ ನೇತೃತ್ವದಲ್ಲಿ 1500 ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗುವುದು. ವಿಶೇಷ ಚೇತನರು, 80 ವರ್ಷ ಮೇಲ್ಪಟ್ಟವರಿಗೆ ನೇರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು. ನೂರಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ. ಯಾವುದೇ ನೂಕುನುಗ್ಗಲು ಆಗದಂತೆ ಭದ್ರತೆ ಕಲ್ಪಿಸಲಾಗುತ್ತಿದೆ. ವಿಶೇಷ ದರ್ಶನದ ಸಾಲು, ಸಾಮಾನ್ಯ ಸರದಿ ಸಾಲು, ಗೋಲ್ಡ್ ಪಾಸ್ ಸಾಲುಗಳಲ್ಲಿ ಹೆಚ್ಚಿನ ಪೊಲೀಸರನ್ನು ನಿಯೋಜನೆ ಮಾಡಲಾಗುತ್ತದೆ. ವಾಹನಗಳ ನಿಲುಗಡೆಗೆ ಪ್ರತ್ಯೇಕ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದರು.

## ಪ್ರತಿ ಗಂಟೆಗೆ 6 ಸಾವಿರ ಭಕ್ತರ ಪ್ರವೇಶ

ಹಾಸನಾಂಬ ದರ್ಶನಕ್ಕೆ ಈ ಬಾರಿ 25 ಲಕ್ಷ ಜನರು ಬರುವ ನಿರೀಕ್ಷೆಯಿದ್ದು ಪ್ರತಿ ಗಂಟೆಗೆ 6 ಸಾವಿರ ಜನರು ದರ್ಶನ ಪಡೆಯುವ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಯಾವುದೇ ರೀತಿಯ ಗೊಂದಲಗಳುಂಟಾಗದಂತೆ ಕ್ರಮ ವಹಿಸಲಾಗಿದೆ. ವಿಐಪಿಗಳಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆ. ದೇವಾಲಯ ತಲುಪಲು ಐದು ದ್ವಾರಗಳಿವೆ. ಗಣ್ಯ ವ್ಯಕ್ತಿಗಳು ಬಂದಾಗ ಸಾರ್ವಜನಿಕ ದರ್ಶನ ವ್ಯವಸ್ಥೆಗೆ ಅಡಚಣೆ ಮಾಡುವುದಿಲ್ಲ. ಅವರಿಗೆ ಪ್ರತ್ಯೇಕ ವ್ಯವಸ್ಥೆ ಇರುವುದರಿಂದ ಸಮಸ್ಯೆಯಾಗುವುದಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅ. 15ರ ಬುಧವಾರ ಬರಲಿದ್ದಾರೆ. ಮಹೋತ್ಸವ ಅಂಗವಾಗಿ ವಿವಿಧ ಜನಪ್ರತಿನಿಧಿಗಳು, ಮಠಾಧೀಶರಿಗೆ ಆಹ್ವಾನ ನೀಡಲಾಗಿದೆ. ಹಾಸನಾಂಬೆ ದೇವಿ ದರ್ಶನಕ್ಕೆ ಕಳೆದ ವರ್ಷ 20 ಲಕ್ಷ ಭಕ್ತರು ಬಂದಿದ್ದರು. ಈ ಬಾರಿ 25 ಲಕ್ಷ ಜನರು ಸೇರುವ ನಿರೀಕ್ಷೆಯಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಹಲವು ಸಭೆ ನಡೆಸಿ ಸಿದ್ಧತೆ ಕೈಗೊಂಡಿದ್ದಾರೆ ಎಂದರು.

ಬೇರೆ ಊರುಗಳಿಂದ ಬರುವ ಭಕ್ತರಿಗಾಗಿ ರೈಲ್ವೆ ನಿಲ್ದಾಣ ಮತ್ತು ಬಸ್ ನಿಲ್ದಾಣದಿಂದ ನಗರ ಸಾರಿಗೆ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಬೆಂಗಳೂರಿನಿಂದ ವಿಶೇಷ ಬಸ್‌ಗಳ ನಿಯೋಜಿಸಲಾಗಿದೆಯೆಂದರು. ಲಕ್ಷಾಂತರ ಜನರು ಬರುವುದರಿಂದ ಅಲ್ಪಸ್ವಲ್ಪ ಸಮಸ್ಯೆಯಾಗಬಹುದು. ಅಂತವುಗಳನ್ನು ನಮ್ಮ ಗಮನಕ್ಕೆ ತಂದರೆ ಮುಂದಿನ ವರ್ಷ ತಿದ್ದುಪಡಿ ಮಾಡಿಕೊಳ್ಳುತ್ತೇವೆ. ಮಾಧ್ಯಮ ಪ್ರತಿನಿಧಿಗಳು ಜಿಲ್ಲಾಡಳಿತಕ್ಕೆ ಅಗತ್ಯ ಸಲಹೆ ನೀಡಬೇಕೆಂದು ಸಚಿವರು ಕೋರಿದರು.

# ಸಕಲೇಶಪುರದಲ್ಲಿ ಔಷಧ ರಹಿತ ಚಿಕಿತ್ಸಾ ಶಿಬಿರಕ್ಕೆ ಚಾಲನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪಟ್ಟಣದ ಗುರುವೇಗೌಡ ಕಲ್ಯಾಣ ಮಂಟಪದಲ್ಲಿ ಬಸವ ಅಕ್ಯೂ ಅಕಾಡೆಮಿ ವತಿಯಿಂದ ಹೀಲರ್ ಚಾಂದಿನಿ ಪರಮೇಶ್ ಅವರ ನೇತೃತ್ವದಲ್ಲಿ ಹಮ್ಮಿಕೊಂಡಿರುವ ಔಷಧ ರಹಿತ ಆರೋಗ್ಯ ಉಚಿತ ಶಿಬಿರವನ್ನು ಶಾಸಕ ಸಿಮೆಂಟ್ ಮಂಜು ಅವರ ಪತ್ನಿ ಪ್ರತಿಭಾ ಮಂಜುನಾಥ್ ದೀಪ ಬೆಳಗಿಸುವ ಮೂಲಕ ಮಂಗಳವಾರ ಉದ್ಘಾಟಿಸಿದರು.

ಬಸವ ಅಕ್ಯೂ ಅಕಾಡೆಮಿ ಹೀಲರ್ ಚಾಂದಿನಿ ಪರಮೇಶ್ ಮಾತನಾಡಿ, ಇಂದಿನ ಕಾಲದಲ್ಲಿ ಜನರು ಔಷಧಿಗಳೇ ಆರೋಗ್ಯದ ಮೂಲ ಎಂದು ನಂಬಿದ್ದಾರೆ. ಆದರೆ ಪ್ರಾಚೀನ ಭಾರತೀಯ ಚಿಕಿತ್ಸಾ ಪದ್ಧತಿಯಲ್ಲಿ ಬಣ್ಣ ಹಾಗೂ ಆಕ್ಯುಪ್ರೆಶರ್ ತಂತ್ರಗಳ ಮೂಲಕವೂ ಆರೋಗ್ಯ ಸುಧಾರಣೆ ಸಾಧ್ಯ. ಬಸವ ಅಕ್ಯೂ ಅಕಾಡೆಮಿ ಸಂಸ್ಥಾಪಕ ಬಸವರಾಜ್ ಅವರು 15 ವರ್ಷಗಳಿಂದ ಪಲ್ಸ್ ಟೆಕ್ನಾಲಜಿಯ ಮೂಲಕ ದೇಹದ ವ್ಯತ್ಯಾಸಗಳು ಹಾಗೂ ವಾತಪಿತ್ತಕಫದ ಅಸಮತೋಲನವನ್ನು ಗುರುತಿಸುವ ಕುರಿತು ಸಂಶೋಧನೆ ನಡೆಸಿದ್ದಾರೆ. ದೇಹದ ದುರ್ಬಲ ಅಂಗಾಂಗಗಳನ್ನು ಗುರುತಿಸಿ, ಆಹಾರ ಕ್ರಮ ಮತ್ತು ಜೀವನ ಶೈಲಿಯಲ್ಲಿ ಬದಲಾವಣೆ ತರಲು ಮಾರ್ಗದರ್ಶನ ನೀಡಲಾಗುತ್ತಿದೆ ಎಂದು ವಿವರಿಸಿದರು.

ಪತ್ರಕರ್ತ ವಿಶ್ವನಾಥ್ ಮಾತನಾಡಿ, ಬಣ್ಣ ಮತ್ತು ಬೀಜ ಥೆರಪಿಯ ಮೂಲಕ ಔಷಧಿ ಸೇವನೆಯ ಅಗತ್ಯವಿಲ್ಲದೇ ಆರೋಗ್ಯ ಕಾಪಾಡಿಕೊಳ್ಳುವುದು ಬಸವ ಅಕ್ಯೂ ಅಕಾಡೆಮಿಯ ಧ್ಯೇಯ. ಬಣ್ಣಗಳ ಮಾಯಾಲೋಕ, ಅಂಗೈಯಲ್ಲಿ ಆರೋಗ್ಯ ಎಂಬುದು ನಮ್ಮ ಸಂದೇಶ. ದೇಹದ ಇಮ್ಯೂನಿಟಿ ಹೆಚ್ಚಿಸುವುದು ಈ ವಿಧಾನಗಳ ಪ್ರಮುಖ ಉದ್ದೇಶ ಎಂದರು.

ರಾಜ್ಯಾದ್ಯಂತ ಬಣ್ಣ ಥೆರಪಿಯ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಮೈಗ್ರೇನ್, ಹೃದಯ ಸಂಬಂಧಿತ ತೊಂದರೆ, ಥೈರಾಯ್ಡ್ ಸೇರಿದಂತೆ ಹಲವಾರು ಗಂಭೀರ ಕಾಯಿಲೆಗಳಿಗೆ ಈ ವಿಧಾನದಿಂದ ಪರಿಹಾರ ದೊರೆಯುತ್ತಿದೆ ಎಂದರು.

500ಕ್ಕೂ ಹೆಚ್ಚು ಮಂದಿ ಔಷಧ ರಹಿತ ಚಿಕಿತ್ಸೆಯ ಪ್ರಯೋಜನ ಪಡೆದರು. ಜಿಲ್ಲಾ ಬಿಜೆಪಿ ಮಹಿಳಾ ಘಟಕದ ಅಧ್ಯಕ್ಷೆ ನೇತ್ರಾವತಿ, ಅಕ್ಕಮಹಾದೇವಿ ಮೋರ್ಚಾ ಅಧ್ಯಕ್ಷೆ ಕೋಮಲ ದಿನೇಶ್, ಹೀಲರ್‌ಗಳಾದ ಸುಬ್ರಹ್ಮಣ್ಯ, ಯೋಗೇಶ್, ಮೈಸೂರಿನ ಪೂರ್ಣಿಮ ಅರಸೀಕೆರೆ, ಮಮತ ಸಿದ್ದರಾಮಯ್ಯ, ಪುಟ್ಟು ಕುಮಾರ್, ಸಂತೋಷ್ (ಉಡುಪಿ) ಸೇರಿದಂತೆ ಅನೇಕರಿದ್ದರು. ಚಿಕ್ಕಬಳ್ಳಾಪುರದ ಹೀಲರ್ ಧನಲಕ್ಷ್ಮಿ ಕಾರ್ಯಕ್ರಮ ನಿರ್ವಹಿಸಿದರು.

# ವಿನಾಕಾರಣ ಅಟ್ರಾಸಿಟಿ ಖಂಡಿಸಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ವಿನಾಕಾರಣ ಜಾತಿ ನಿಂದನೆ ಪ್ರಕರಣ ದಾಖಲಿಸಲಾಗುತ್ತಿದೆಯೆಂದು ಆರೋಪಿಸಿ ಜೆಡಿಎಸ್ ಮುಖಂಡ ಎನ್.ಆರ್. ಸಂತೋಷ್ ನೇತೃತ್ವದಲ್ಲಿ ಮಂಗಳವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಮುಷ್ಕರ ವಾಪಾಸ್ ಪಡೆಯದ ಹಿನ್ನಲೆಯಲ್ಲಿ ಪೊಲೀಸರು 21 ಜನರನ್ನು ವಶಕ್ಕೆ ಪಡೆದರು.

ಪ್ರತಿಭಟನೆ ನಡೆಸಲು ಪೊಲೀಸರ ಅನುಮತಿ ಪಡೆದಿಲ್ಲ, ಏಕಾಂಗಿ ಪ್ರತಿಭಟನೆಯೆಂದು ಹೇಳಿ ಹತ್ತಾರು ಜನರನ್ನು ಸೇರಿಸಿದ್ದು ಅಪರಾಧವೆಂದು ಪೊಲೀಸರು ಪ್ರತಿಭಟನೆಗೆ ಆಕ್ಷೇಪ ವ್ಯಕ್ತಪಡಿಸಿದರು. ಅದರಿಂದ ಸ್ಥಳದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಯಿತು.

ಯಾದವ ಹಾಗೂ ಇತರ ಸಮುದಾಯ ಮುಖಂಡರ ಮೇಲೆ ಜಾತಿ



ನಿಂದನೆ ಕೇಸು ದಾಖಲಿಸಿ ವಿನಾಕಾರಣ ತೊಂದರೆ ನೀಡಲಾಗುತ್ತಿದೆಯೆಂದು ಪಿಪಿ ವೃತ್ತದಲ್ಲಿ ಏಕಾಂಗಿ ಪ್ರತಿಭಟನೆ ನಡೆಸುವುದಾಗಿ ವಾರದ ಹಿಂದೆ ಎನ್.ಆರ್. ಸಂತೋಷ್ ಮಾಹಿತಿ ನೀಡಿದ್ದರೆನ್ನಲಾಗಿದೆ.

ಎನ್.ಆರ್. ಸಂತೋಷ್ ಮಾತನಾಡಿ, ತಾಲ್ಲೂಕಿನಲ್ಲಿ ಬಡವರಿಗೆ ಸ್ವಾತಂತ್ರ್ಯ ಇಲ್ಲದಂತಾಗಿದೆ. ಸಣ್ಣಪುಟ್ಟ ಅಸಮಾಧಾನ ಹೊರ ಹಾಕಿದವರ ಮೇಲೆ ಜಾತಿ ನಿಂದನೆ ಪ್ರಕರಣ ದಾಖಲಿಸಲಾಗುತ್ತಿದೆ. ರಾಜಕೀಯ ಒತ್ತಡದಿಂದ ಕೇಸು ದಾಖಲಿಸಿ ಪೊಲೀಸರು ತೊಂದರೆ ನೀಡುತ್ತಿದ್ದಾರೆ. ಈ ಷಡ್ಯಂತ್ರ ಕೊನೆಯಾಗುವವರೆಗೆ ಪ್ರತಿಭಟನೆಯಿಂದ ಹಿಂದೆ ಸರಿಯುವುದಿಲ್ಲವೆಂದು ಎಚ್ಚರಿಕೆ ನೀಡಿದರು.

ನಗರಸಭೆ ಮಾಜಿ ಅಧ್ಯಕ್ಷ ಗಿರೀಶ್, ಮುಖಂಡರಾದ ಉಮೇಶ್, ಬೋಜನಾಯ್ಕ, ಜಯರಾಮು, ರಮೇಶ್ ನಾಯ್ಡು, ಶಿವನ್ ರಾಜ್, ಚಿದಾನಂದ, ರಘು ಇತರರಿದ್ದರು.

# ಮಹರ್ಷಿ ವಾಲ್ಮೀಕಿ ಮಹಾ ಶ್ರೇಷ್ಠ ಕವಿ: ಸಂಸದ ಶ್ರೇಯಸ್

## ನಗರದಲ್ಲಿ ಅರ್ಥಪೂರ್ಣ ವಾಲ್ಮೀಕಿ ಜಯಂತಿ | ಆಕರ್ಷಕ ಮೆರವಣಿಗೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹರ್ಷಿ ವಾಲ್ಮೀಕಿ ಮಹಾ ಶ್ರೇಷ್ಠ ಕವಿ. ಅವರು ರಚಿಸಿದ ರಾಮಾಯಣ ಮಹಾಕಾವ್ಯ ಕೇವಲ ಒಂದು ಕಾವ್ಯ ಅಥವಾ ಗ್ರಂಥ ಅಷ್ಟೇ ಅಲ್ಲ, ಧರ್ಮ, ಸತ್ಯ, ನಿಷ್ಠೆಯಿಂದ ಕೂಡಿರುವ ಕಥೆಯಾಗಿದೆ ಎಂದು ಸಂಸದ ಶ್ರೇಯಸ್ ಪಟೇಲ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಸಹಯೋಗದಲ್ಲಿ ಮಂಗಳವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಿ ಮಾರ್ಪಟ್ಟು, ಯಾವ ರೀತಿಯಲ್ಲಿ ಸಾಧನೆ ಮಾಡಬಹುದು ಎಂಬುದಕ್ಕೆ ನೈಜ ಉದಾಹರಣೆ ಮಹರ್ಷಿ ವಾಲ್ಮೀಕಿ. ರಾಮಾಯಣದಂತಹ ಕೃತಿಯನ್ನು ವಾಲ್ಮೀಕಿ ರಚಿಸಿರುವುದು ಹೆಮ್ಮೆಯ ವಿಷಯ.

ಎಲ್ಲರಿಗೂ ಎಲ್ಲಾ ರೀತಿಯ ಹಕ್ಕುಗಳು ಸಿಗಬೇಕೆಂಬುದು ಅವರ ಆಶಯವಾಗಿತ್ತು. ಆ ನಿಟ್ಟಿನಲ್ಲಿ ಅವರು ಬರೆದಿರುವ ಶ್ಲೋಕಗಳು ಆದರ್ಶಗಳನ್ನು ಹಾಗೂ ಅವರು ಹಾಕಿಕೊಟ್ಟಿರುವ ಮಾರ್ಗದಲ್ಲಿ ನಡೆದು, ನಮ್ಮ ಮುಂದಿನ ಪೀಳಿಗೆಗೂ ತಿಳಿ ಹೇಳುವ ಕೆಲಸವನ್ನು ಮಾಡಬೇಕು. ಅದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರ ಅಧ್ಯಕ್ಷತೆಯಲ್ಲಿ ಈ ಹಿಂದೆ ಸಭೆ ನಡೆಸಿ ವಾಲ್ಮೀಕಿ ಸಮಾಜದವರ ಅಭಿವೃದ್ಧಿಗಾಗಿ 10 ಗುಂಟೆ ಜಾಗವನ್ನು ಮಂಜೂರು ಮಾಡಲಾಗಿತ್ತು. ಆ ಸ್ಥಳದಲ್ಲಿ ಮುಂದಿನ ದಿನಗಳಲ್ಲಿ ಜಿಲ್ಲಾಡಳಿತ ಮತ್ತು ಜನಪ್ರತಿನಿಧಿಗಳು ಸೇರಿ ಸಮುದಾಯ ಭವನವನ್ನು ನಿರ್ಮಾಣ ಮಾಡುವುದಕ್ಕೆ ಆರಂಭಿಸುತ್ತೇವೆ ಎಂದು ತಿಳಿಸಿದರು.



ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿ ವಾಲ್ಮೀಕಿ ಮಹರ್ಷಿಯವರು ಆದಿ ಕವಿ, ಜಗತ್ತಿನ ಮೊದಲ ಕವಿ, ರಾಮಾಯಣವನ್ನು ರಚಿಸಿ ಜಗತ್ತಿಗೆ ಉಡುಗೊರೆಯನ್ನು ನೀಡಿದ ಇವರು ಅಸಾಮಾನ್ಯರು. ಮನುಷ್ಯರಲ್ಲಿಯೇ ಅತ್ಯುತ್ತಮವಾದ ಮನುಷ್ಯ ಶ್ರೀರಾಮ. ಅಂತಹ ಮಹಾತ್ಮರ ಕುರಿತಾಗಿ ಬರೆದು, ಅವರ ಜೀವನವನ್ನು ಪ್ರತಿಯೊಬ್ಬರು ಅನುಸರಿಸುವಂತೆ ಮಾಡಿದವರಾಗಿದ್ದಾರೆ ಎಂದು ತಿಳಿಸಿದರು.

ರಾಮಾಯಣ ರಚನೆಯಾಗಿರುವ ಕಾಲದ ಕುರಿತು ಎಲ್ಲಿಯೂ ನಿಖರವಾದ ಮಾಹಿತಿ ಇಲ್ಲ. ಆದರೆ ಆ ಗ್ರಂಥ ಇಂದಿಗೂ ಪ್ರಸ್ತುತವಾಗಿದೆ. ಇಂದಿಗೂ ನಮ್ಮ ಸಮಾಜದ ಜನರಿಗೆ ಸಂದೇಶವನ್ನು ನೀಡುತ್ತಿದೆ. ಈ ಕೃತಿಯಲ್ಲಿ ಅಖಂಡ ಭಾರತದ ಚಿತ್ರಣವನ್ನೇ ಕೊಟ್ಟಿದ್ದಾರೆ. ಒಬ್ಬ ಅಬಲೆ ಮಹಿಳೆ ನಿಶ್ಚಿಂತೆಯಾಗಿ ವಾಲ್ಮೀಕಿ ಅವರ ಆಶ್ರಮದಲ್ಲಿ ಜೀವನ ಮಾಡಬಹುದುದಾಗಿತ್ತು ಎಂದರು.

ಶ್ರೀ ರಾಮಾಯಣ ದರ್ಶನವನ್ನು ಕುವೆಂಪು ಅವರು ಬರೆದರೆ, ತುಳಿಸಿದಾಸರು ತುಳಸಿ ರಾಮಾಯಣ ಬರೆದಿದ್ದಾರೆ ಎಂದರು.

### ನಗರದಲ್ಲಿ ಅದ್ದೂರಿ ಮೆರವಣಿಗೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಸಹಯೋಗದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿಯಿಂದ ಅಂಬೇಡ್ಕರ್ ಭವನದ ವರೆಗೆ ಅದ್ದೂರಿ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಡಾ.ಬಿ.ಆರ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ನಂತರ ಮಹರ್ಷಿ ವಾಲ್ಮೀಕಿ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರೊಂದಿಗೆ ಮೆರವಣಿಗೆಗೆ ಚಾಲನೆ ನೀಡಿದರು.

# ಮಾದಿಗ ಜಾತಿ ನಮೂದಿಸಲು ಸಮೀಕ್ಷೆದಾರರ ಹಿಂದೇಟು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ವೇಳೆ ಕರ್ತವ್ಯ ನಿರತ ಶಿಕ್ಷಕರು ಸಾರ್ವಜನಿಕರು ಹೇಳಿದ ಜಾತಿ ನಮೂದಿಸದೆ ಅನ್ಯಾಯ ಎಸಗುತ್ತಿದ್ದಾರೆಂದು ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಳ್ಳಿಮೈಸೂರು ಹೋಬಳಿ ತೇಜೂರು ಮಹದೇಶ್ವರ ಕಾಲೋನಿಯಲ್ಲಿ ಸಮೀಕ್ಷೆಗೆ ಬಂದಿದ್ದ ಶುಭಾ ಮತ್ತು ಲಲಿತಾ ಎಂಬುವವರು ಸ್ಥಳೀಯರೊಂದಿಗೆ ಉಡಾಫೆಯಿಂದ ವರ್ತಿಸಿದ್ದಾರೆ. ಕಲಂ 061ರಲ್ಲಿ ಜಾತಿ ನಮೂದಿಸುವಾಗ ಮಾದಿಗ ಎಂದು ಹೇಳಿದರೆ ಆದಿ ಕರ್ನಾಟಕ ಅಥವಾ ಆದಿ ದ್ರಾವಿಡ ಮಾತ್ರ ಬರೆಸಬೇಕೆಂದು ಹೇಳಿದ್ದಾರೆ. ಗ್ರಾಮದಲ್ಲಿ 135 ಕುಟುಂಬಗಳಿದ್ದು ಎಲ್ಲರೂ ಮಾದಿಗ ಸಮಾಜಕ್ಕೆ ಸೇರಿದ್ದಾರೆ. ಸಮೀಕ್ಷೆದಾರರು ಮಾದಿಗ ಬಿಟ್ಟು ಬೇರೆ ಜಾತಿ ನಮೂದಿಸಿದ್ದು ಸಮುದಾಯಕ್ಕೆ ಅನ್ಯಾಯ ಮಾಡಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ಮೀಸಲಾತಿಗಾಗಿ ಮಾದಿಗ ಸಮುದಾಯ ಕಳೆದ 35 ವರ್ಷಗಳಿಂದ ಹೋರಾಟ ನಡೆಸಿಕೊಂಡು ಬಂದಿದೆ. ನಮ್ಮ ಅಸ್ತಿತ್ವ ಸಾಬೀತುಪಡಿಸಲು ಸರ್ಕಾರ ಒಂದು ಅವಕಾಶ ಕಲ್ಪಿಸಿದೆ. ಅದಕ್ಕೂ ಶಿಕ್ಷಕರು ಎಳ್ಳು ನೀರು ಬಿಡುತ್ತಿರುವುದು ಯಾವ ನ್ಯಾಯ. ಇದು ಕೇವಲ ಒಂದು ಗ್ರಾಮದ ಸಮಸ್ಯೆಯಲ್ಲ. ಎಲ್ಲಾ ಕಡೆ ಈ ರೀತಿಯೇ ಆಗುತ್ತಿದೆ. ಮೇಲಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು. ಇಲ್ಲವಾದರೆ ಪ್ರತಿಭಟನೆ ನಡೆಸಲಾಗುವುದೆಂದು ಎಚ್ಚರಿಸಿದರು. ಸಮುದಾಯ ಮುಖಂಡರು ಹೊಳೆನರಸೀಪುರ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

# ಮುಖ್ಯ ವಾಹಿನಿ ಮಾಧ್ಯಮಗಳ ಕಡೆಗಣನೆ: ಮೌನ ಪ್ರತಿಭಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಈ ಬಾರಿಯ ಹಾಸನಾಂಬ ಜಾತ್ರಾ ಮಹೋತ್ಸವದಲ್ಲಿ ಮುಖ್ಯ ವಾಹಿನಿ ಮಾಧ್ಯಮಗಳ ಕಡೆಗಣಿಸಲಾಗಿದೆ ಎಂದು ಆರೋಪಿಸಿ ಜಿಲ್ಲಾ ಕಾರ್ಯನಿತರ ಪತ್ರಕರ್ತರ ಸಂಘದಿಂದ ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಎದುರು ಮೌನ ಪ್ರತಿಭಟನೆ ನಡೆಸಲಾಯಿತು.

ಕೇವಲ ಸೋಷಿಯಲ್ ಮೀಡಿಯಾ ಇನ್ಫ್ಲುಯೆನ್ಸರ್‌ಗಳಿಗೆ ಆದ್ಯತೆ ನೀಡಿದೆ. ಪ್ರತಿವರ್ಷ ಜಾತ್ರೆ ಆರಂಭವಾಗುವ ಮೊದಲು ಪತ್ರಕರ್ತರೊಂದಿಗೆ ಪೂರ್ವ ಸಿದ್ಧತಾ ಸಭೆ ನಡೆಸಲಾಗುತ್ತಿತ್ತು. ಈ ಬಾರಿ ಸಾಮಾಜಿಕ ಜಾಲತಾಣಗಳಿಗೆ ಎಲ್ಲಾ ಮಾಹಿತಿ ನೀಡಿ ಪ್ರಮುಖ ಮಾಧ್ಯಮ ಸಂಸ್ಥೆಗಳನ್ನು ಕಡೆಗಣಿಸಿದೆ ಎಂದು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ವೇಣುಕುಮಾರ್ ಆರೋಪಿಸಿದರು.

ಮಾಧ್ಯಮ ಪ್ರತಿನಿಧಿಗಳಿಗೆ ಯಾವುದೇ ಮಾಹಿತಿ ನೀಡದೆ ಇರುವ ಕುರಿತು ಸಚಿವ ರಾಮಲಿಂಗಾ ರೆಡ್ಡಿ ಅವರನ್ನು ಸುದ್ದಿಗೋಷ್ಠಿಯಲ್ಲಿ ಪ್ರಶ್ನಿಸಿದಾಗ, ಬುಧವಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಜಂಟಿ ಸುದ್ದಿಗೋಷ್ಠಿ ಮೂಲಕ ಗೊಂದಲಕ್ಕೆ ತೆರೆ ಎಳೆಯುತ್ತಾರೆಂದು ಸ್ಪಷ್ಟಪಡಿಸಿದರು. ಪಕ್ಕದಲ್ಲೇ ಇದ್ದ ಜಿಲ್ಲಾಧಿಕಾರಿ ಅವರು ಪ್ರತಿಕ್ರಿಯಿಸಲು ನಿರಾಕರಿಸಿದರು.

# ಲಂಚಕ್ಕೆ ಬೇಡಿಕೆ: ಚಿಕ್ಕಹಳ್ಳಿ ಪಿಡಿಓ ಅಮಾನತು

ಹಾಸನ: ಇ-ಸ್ವತ್ತು ವಿತರಣೆಗೆ ಸಾರ್ವಜನಿಕರಿಂದ ಲಂಚಕ್ಕೆ ಬೇಡಿಕೆಯಿಟ್ಟಿದ್ದ ಆರೋಪದಡಿ ಅರಕಲಗೂಡು ತಾಲ್ಲೂಕಿನ ಚಿಕ್ಕಹಳ್ಳಿ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಪಿ. ಮನು ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಆದೇಶಿಸಿದ್ದಾರೆ. ಕೋನಾಪುರ ಗ್ರಾಮದ ಕೆ.ಕೆ. ಮಹೇಶ್ ಅವರ ನಿವೇಶನ ಖಾತೆ ಸಂಖ್ಯೆ52 ಮತ್ತು 206ಕ್ಕೆ ಸಂಬಂಧಿಸಿ ಇ-ಸ್ವತ್ತು ವಿತರಣೆ ಮಾಡಲು ಹಣ ಪಡೆದಿರುವ ಮತ್ತು ಹೆಚ್ಚುವರಿ ಹಣಕ್ಕೆ ಬೇಡಿಕೆ ಇಟ್ಟಿರುವ ಸುದ್ದಿಯು ದಿನಪತ್ರಿಕೆ, ಸುದ್ದಿ ಮಾಧ್ಯಮಗಳಲ್ಲಿ ಸುದ್ದಿ ಪ್ರಸಾರವಾಗಿರುವ ಹಿನ್ನಲೆಯಲ್ಲಿ ಹಾಗೂ 15ನೇ ಹಣಕಾಸು ಯೋಜನೆಯ ಅನುದಾನ ಮತ್ತು ನಿಧಿ-1, ನಿಧಿ-2 ರ ಅನುದಾನವನ್ನು ನಿಯಮ ಬಾಹಿರವಾಗಿ ವೆಚ್ಚ ಮಾಡಿರುವ ಬಗ್ಗೆ ಶಾಸಕ ಎ. ಮಂಜು ಅವರು ಪತ್ರ ಬರೆದಿದ್ದರು. ಸಾಕ್ಷ್ಯಾಧಾರ ಪರಿಗಣಿಸಿದ ಜಿಪಂ ಕಾರ್ಯನಿರ್ವಹಣಾಧಿಕಾರಿ ಅ. 6 ರಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿ ಆದೇಶಿಸಿದ್ದಾರೆ.

# ಹಾಸನಾಂಬ ಉತ್ಸವದಲ್ಲಿ ಸ್ಥಳೀಯರಿಗೆ ತೊಂದರೆ ಕೊಡಲ್ಲ

## ಪಾಲಿಕೆ ಮೇಯರ್ ಗಿರೀಶ್ ಚನ್ನವೀರಪ್ಪ ಭರವಸೆ | ಸದಸ್ಯರ ಅಳಲು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಾಸನಾಂಬ ಜಾತ್ರೆ ವೇಳೆ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗದ ರೀತಿಯಲ್ಲಿ ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತದೊಂದಿಗೆ ಮಾತುಕತೆ ನಡೆಸುತ್ತೇನೆ ಎಂದು ಮಹಾನಗರ ಪಾಲಿಕೆ ಮೇಯರ್ ಗಿರೀಶ್ ಚನ್ನವೀರಪ್ಪ ಹೇಳಿದರು.

ಮಹಾನಗರ ಪಾಲಿಕೆ ಕುವೆಂಪು ಸಭಾಂಗಣದಲ್ಲಿ ಸೋಮವಾರ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿ, ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ನಿವಾಸಿಗಳಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಸದಸ್ಯರು ತಮ್ಮ ವಾರ್ಡ್‌ಗಳ ಮೂಲಭೂತ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದ ತಕ್ಷಣವೇ ಪರಿಹರಿಸುವ ಕೆಲಸ ಮಾಡಬೇಕು. ಸಣ್ಣ ಪುಟ್ಟ ಸಮಸ್ಯೆ ಸಾಮಾನ್ಯ ಸಭೆವರೆಗೂ ಬರಬಾರದು. ಎಲ್ಲಾ ಸದಸ್ಯರ ವಾರ್ಡ್‌ಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ನಡೆಸಲು ಶೀಘ್ರದಲ್ಲೇ ಟೆಂಡರ್ ಕರೆಯುವ ಮೂಲಕ ಕೆಲಸ ಆರಂಭಿಸಲಾಗುವುದು ಎಂದು ಭರವಸೆ ನೀಡಿದರು.

ಸದಸ್ಯರು ಕುಡಿಯುವ ನೀರು, ವಿದ್ಯುತ್, ಚರಂಡಿ, ಯುಜಿಡಿ ಸೇರಿ ಹಲವು ಸಮಸ್ಯೆಗಳನ್ನು ತಮ್ಮ ಗಮನಕ್ಕೆ ತಂದಿದ್ದಾರೆ. ಅವುಗಳನ್ನು ಹಂತ ಹಂತವಾಗಿ ಶೀಘ್ರದಲ್ಲೇ ಬಗೆಹರಿಸುವ ನಿಟ್ಟಿನಲ್ಲಿ ಕೆಲಸ ಮಾಡಲಾಗುವುದು. ಅಧಿಕಾರಿಗಳು ಕೂಡ ಸದಸ್ಯರು ಹೇಳಿದಂತಹ ಕೆಲಸವನ್ನ ತಕ್ಷಣವೇ ಬಗೆಹರಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಸದಸ್ಯ ನವೀನ್ ನಾಗರಾಜ್ ಮಾತನಾಡಿ, ನನ್ನ ವಾರ್ಡ್‌ನಲ್ಲಿ ಯುಜಿಡಿ ಸಮಸ್ಯೆ ಇದ್ದು ಕುಡಿಯುವ ನೀರು, ಬೋರ್‌ವೆಲ್ ಸಮಸ್ಯೆಗಳಿದ್ದು ಅದನ್ನ ತಕ್ಷಣವೇ ಬಗೆಹರಿಸಿ ಕೊಡಬೇಕು ಮತ್ತು ಕಾಮಗಾರಿ ಟೆಂಡರ್ ಮಾಡದೆ ಸಾಕಷ್ಟು ತೊಂದರೆಯಾಗುತ್ತದೆ ಇದರ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.



### ಪಾಲಿಕೆ ಆಸ್ತಿಗೆ ನಾಮಫಲ ಅಳವಡಿಕೆ

ಸಭೆ ಪ್ರಾರಂಭದಲ್ಲೇ ಸದಸ್ಯ ಯೋಗೇಂದ್ರ ಬಾಬು ಮಾತನಾಡಿ, ನಾನು ಪ್ರತಿ ಸಭೆಯಲ್ಲಿ ಕೂಡ ಮಲೆನಾಡು ಶಿಕ್ಷಣ ಸಂಸ್ಥೆ ಪಾಲಿಕೆ ಆಸ್ತಿ ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಪ್ರಶ್ನೆ ಕೇಳುತ್ತಿದ್ದೇನೆ. ಅದಕ್ಕೆ ಸಮರ್ಪಕವಾದ ಉತ್ತರ ಕೊಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಹಲವು ದಿನಗಳಿಂದ ಇರುವ ಈ ಸಮಸ್ಯೆಯನ್ನ ತಾರ್ಕಿಕ ಅಂತ್ಯ ಕಾಣುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕೆಂದು ಹಲವು ಸದಸ್ಯರು ಆಗ್ರಹಿಸಿದರು.

ಇದಕ್ಕೆ ಉತ್ತರಿಸಿದ ಮೇಯರ್, ನಾನು ಅಧಿಕಾರಕ್ಕೆ ಬಂದಮೇಲೆ ಅವರಿಗೆ ನೋಟಿಸ್ ನೀಡಿ ಕಾಲೇಜಿನ ಜಾಗವನ್ನು ಸರ್ವೆ ಮಾಡಲಾಗಿದೆ ಅದಕ್ಕೆ ಸಂಬಂಧಿಸಿದಂತೆ ತೆರಿಗೆಯನ್ನು ಕೂಡ ಕಟ್ಟುವಂತೆ ಸೂಚನೆ ನೀಡಲಾಗಿದೆ. ಅಲ್ಲದೆ ಮಹಾನಗರ ಪಾಲಿಕೆಗೆ 1.37 ಎಕರೆ ಜಾಗ ನಮ್ಮ ವ್ಯಾಪ್ತಿಗೆ ಬರುವುದರಿಂದ ತಕ್ಷಣವೇ ಅಲ್ಲಿ ಪಾಲಕೆ ವ್ಯಾಪ್ತಿಗೆ ಸೇರಿದ ಜಾಗ ಎಂದು ನಾಮಫಲಕ ಹಾಕಲಾಗುವುದು ಎಂದು ತಿಳಿಸಿದರು.

### ಶೀಘ್ರದಲ್ಲೇ ಕ್ರಮ

ಯೋಗೇಂದ್ರ ಬಾಬು ಮಾತನಾಡಿ, ಜಾಹೀರಾತು ನಾಮಫಲಕ ಹಾಕುವ ಬಗ್ಗೆ ಕಳೆದ ಬಾರಿ ಸಭೆಯಲ್ಲಿ ಪ್ರಸ್ತಾಪ ಮಾಡಿದ್ದೆ ಅದಕ್ಕೆ ಏನು ಕ್ರಮ ಕೈಗೊಂಡಿದ್ದೀರಿ ಎಂದು ಪ್ರಶ್ನಿಸಿದರು. ಈಗಾಗಲೇ ಸಂಬಂಧಪಟ್ಟವರಿಗೆ ನೋಟಿಸ್ ನೀಡಲಾಗಿದೆ ನಮ್ಮ ಕಚೇರಿಯಲ್ಲಿ ಕಡತ ನಾಪತ್ತೆಯಾಗಿದೆ ಗುತ್ತಿಗೆದಾರನ ಹತ್ತಿರ ಇರುವಂತಹ ಕಡತ ತರಿಸಿಕೊಂಡು ಅದರಲ್ಲಿ ಎಷ್ಟು ವರ್ಷಕ್ಕೆ ಮಾಡಿಕೊಡಲಾಗಿದೆ ಎಂಬುದನ್ನು ಪರಿಶೀಲಿಸಿ, ಶೀಘ್ರದಲ್ಲೇ ಕ್ರಮ ಕೈಗೊಳ್ಳಲಾಗುವುದು ಮತ್ತು ಅನಧಿಕೃತವಾಗಿ ಇತ್ತೀಚೆಗೆ ಆಗಿರುವಂತಹ ಜಾಹೀರಾತು ಫಲಕವನ್ನ ತೆರವು ಮಾಡಲಾಗುವುದು ಎಂದು ಹೇಳಿದರು.

### ಹಿಂಸೆ ಕೊಡುವುದು ಬೇಡ

ಪ್ರತಿವರ್ಷ ಹಾಸನಾಂಬ ಜಾತ್ರೆ ಬಂದರೆ ದೇವಾಲಯದ ಸುತ್ತಮುತ್ತಲಿನ ನಿವಾಸಿಗಳು, ವಾಪಾರಿಗಳು ಸಮಸ್ಯೆ ಅನುಭವಿಸುವಂತಾಗಿದೆ. ಬೇಕಿದ್ದರೆ ಅಲ್ಲಿನ ನಿವಾಸಿಗಳನ್ನು ನಾನು ಒಪ್ಪಿಸುತ್ತೇನೆ, ನಮಗೆ ಸೂಕ್ತ ಪರಿಹಾರವನ್ನ ನೀಡಿದರೆ ಮನೆಗಳನ್ನೇ ಖಾಲಿ ಮಾಡಿಕೊಂಡು ಹೋಗುತ್ತೇವೆ. ಈ ರೀತಿ ಹಿಂಸೆ ಕೊಡುವುದು ಬೇಡ. ಈ ಬಗ್ಗೆ ಮೇಯರ್ ಜಿಲ್ಲಾಡಳಿತದ ಗಮನ ಸೆಳೆಯಬೇಕೆಂದು ಸದಸ್ಯರು ಒತ್ತಾಯಿಸಿದರು.


ಮತ್ತೊಬ್ಬ ಸದಸ್ಯ ಚಂದ್ರೇಗೌಡ ಮಾತನಾಡಿ, ಹಾಸನಾಂಬ ಉತ್ಸವದ ಸಂದರ್ಭದಲ್ಲಿ ನಗರದಾದ್ಯಂತ ಲೈಟಿಂಗ್ ವ್ಯವಸ್ಥೆ ಹಾಕಲಾಗುತ್ತಿದೆ ಆದರೆ ತಣ್ಣೀರು ಹಳ್ಳಕ್ಕೆ ಸರಿಯಾದ ರೀತಿ ವ್ಯವಸ್ಥೆ ಮಾಡಿಲ್ಲ. ಈ ಹಿನ್ನೆಲೆ ಕ್ರಮ ಕೈಗೊಳ್ಳಿ ಎಂದು ಮನವಿ ಮಾಡಿದರು.

ಉಪ ಮೇಯರ್ ಹೇಮಲತಾ ಕಮಲ್ ಕುಮಾರ್, ಆಯುಕ್ತ ಕೃಷ್ಣಮೂರ್ತಿ ಹಾಗೂ ಅಧಿಕಾರಿಗಳು, ಸದಸ್ಯರು ಹಾಜರಿದ್ದರು

### ಮನೆ ಬಾಗಿಲಿಗೆ ಬ್ಯಾರಿಕೇಡ್ ತೊಂದರೆ

ಹಾಸನಾಂಬ ಜಾತ್ರೆ ಹೆಸರಿನಲ್ಲಿ ಆ ಭಾಗದ ನಿವಾಸಿಗಳಿಗೆ ಕಿರುಕುಳ ನೀಡಲಾಗುತ್ತಿದೆ. ಮನೆ ಬಾಗಿಲಿಗೆ ಬ್ಯಾರಿಕೇಡ್‌ಗಳನ್ನು ಅಳವಡಿಸಿ ಮನೆಯಿಂದ ಹೊರಗೆ ಬಾರದಂತೆ ಮಾಡಿದ್ದಾರೆ. ಹೀಗಾದರೆ ಅಲ್ಲಿನ ಜನರು ಓಡಾಡುವುದು ಹೇಗೆ. ಅನಾರೋಗ್ಯ ಪೀಡಿತರನ್ನು ಆಸ್ಪತ್ರೆ ಸಾಗಿಸಲು ಅಂಬುಲೆನ್ಸ್ ಬರಲು ಜಾಗವಿಲ್ಲ. ಸಮಸ್ಯೆ ಬಗ್ಗೆ ಹೇಳಿಕೊಂಡರೆ ಗುತ್ತಿಗೆದಾರ ಜಾತ್ರೆ ಮುಗಿಯುವ ವರೆಗೆ ಮನೆ ಖಾಲಿ ಮಾಡಿಕೊಂಡು ಹೋಗುವಂತೆ ನಿವಾಸಿಗಳಿಗೆ ಬೆದರಿಕೆ ಹಾಕುತ್ತಾನೆ ಎಂದು ಸದಸ್ಯ ಚಂದ್ರು ಅವರು ಆರೋಪಿಸಿದರು.

# ಬೆಟ್ಟದ ಭೈರವೇಶ್ವರ ದೇಗುಲ ಅಭಿವೃದ್ಧಿಗೆ ಕ್ರಮ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಬೆಟ್ಟದ ಭೈರವೇಶ್ವರ ದೇವಾಲಯವನ್ನು ಅಭಿವೃದ್ಧಿಪಡಿಸಿ ಪ್ರವಾಸೋದ್ಯಮ ಉತ್ತೇಜನಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು. ತಾಲ್ಲೂಕಿನ ಹಾನಬಾಳು ಹೋಬಳಿ ದೇವಾಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಟ್ಟದ ಭೈರವೇಶ್ವರ ದೇವಾಲಯದ ಬಳಿ ನಿರ್ಮಾಣಗೊಳ್ಳುತ್ತಿರುವ ವೀಕ್ಷಣಾ ಗೋಪುರ ಕಾಮಗಾರಿ ಪರಿಶೀಲಿಸಿ ಮಾತನಾಡಿ, ಐತಿಹಾಸಿಕ ಬೆಟ್ಟದ ಭೈರವೇಶ್ವರ ದೇವಸ್ಥಾನವು ಈ ಭಾಗದಲ್ಲಿ ಪ್ರವಾಸಿಗರ ಪ್ರಮುಖ ಆಕರ್ಷಣಾ ಕೇಂದ್ರವಾಗಿದೆ. ಪ್ರಕೃತಿಯ ಅದ್ಭುತ ಸೌಂದರ್ಯವನ್ನು ವೀಕ್ಷಿಸಲು ವೀಕ್ಷಣಾ ಗೋಪುರ ನಿರ್ಮಿಸಲಾಗುತ್ತಿದೆ. ದೇವಸ್ಥಾನಕ್ಕೆ ಆಗಮಿಸುವ ಭಕ್ತರು ಮತ್ತು ಪ್ರವಾಸಿಗರ ಅನುಕೂಲಕ್ಕಾಗಿ ಶೌಚಾಲಯ ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗುವುದು ಎಂದು ತಿಳಿಸಿದರು.

ದೇವಸ್ಥಾನಕ್ಕೆ ಬರುವ ರಸ್ತೆ ಕೆಲವೆಡೆ ಹದಗೆಟ್ಟಿರುವುದರಿಂದ ಅದನ್ನೂ ಶೀಘ್ರದಲ್ಲೇ ಅಭಿವೃದ್ಧಿಪಡಿಸಲಾಗುವುದು. ದೇವಾಲಯ ಆವರಣದಲ್ಲಿ ಹೊರ ಊರುಗಳಿಂದ ಬರುವ ಕೆಲವು ಪ್ರವಾಸಿಗರು ದುರವರ್ತನೆ ತೋರುತ್ತಿದ್ದಾರೆ ಹಾಗೂ ಚಪ್ಪಲಿ ಧರಿಸಿ ದೇವಸ್ಥಾನ ಪ್ರವೇಶಿಸುತ್ತಿದ್ದಾರೆ ಎಂಬ ದೂರುಗಳಿದ್ದು, ಈ ಹಿನ್ನೆಲೆಯಲ್ಲಿ ಇಲ್ಲಿಗೆ ಪ್ರವಾಸಿ ಪೊಲೀಸ್‌ರನ್ನು ನಿಯೋಜಿಸಲಾಗುವುದು ಎಂದರು.

ದೇವಸ್ಥಾನಕ್ಕೆ ಆಗಮಿಸುವ ಎಲ್ಲರೂ ಸ್ವಚ್ಛತೆಯನ್ನು ಕಾಪಾಡಿ, ದೇಗುಲದ ಗೌರವಕ್ಕೆ ಚ್ಯುತಿ ಬಾರದಂತೆ ಎಚ್ಚರ ವಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಲಯ ಅರಣ್ಯಾಧಿಕಾರಿ ಹೇಮಂತ್, ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾಚೇನಹಳ್ಳಿ ಏತ ನೀರಾವರಿ 3ನೇ ಹಂತಕ್ಕೆ ಚಾಲನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ದೂತನೂರು ಕಾವಲಿನಲ್ಲಿ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ ಮೂರನೇ ಹಂತದ ನೀರು ಪೂರೈಕೆ ಕಾರ್ಯಕ್ಕೆ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮೂರನೇ ಹಂತದ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯಿಂದ ಸುಮಾರು 4,400 ಎಕರೆ ಪ್ರದೇಶಕ್ಕೆ ನೀರು ಒದಗಲಿದೆ. ಹೆಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದಾಗ ಮೊದಲ ಮತ್ತು ಎರಡನೇ ಹಂತದ ಯೋಜನೆಗಳಿಗೆ ಹಣ ಬಿಡುಗಡೆ ಮಾಡಿದ್ದರು ಎಂದು ತಿಳಿಸಿದರು.

ಕಾಚೇನಹಳ್ಳಿ ಏತ ನೀರಾವರಿಯ ಮೊದಲ ಹಂತದ ಯೋಜನೆ 1,390 ಎಕರೆ, ಎರಡನೇ ಹಂತದ ಯೋಜನೆ 6,610 ಎಕರೆ, ಮೂರನೇ ಹಂತದ ಯೋಜನೆಯಿಂದ 4,400 ಎಕರೆ ಪ್ರದೇಶಕ್ಕೆ ನೀರು ಒದಗಲಿದೆ. ಈ ಯೋಜನೆ ಕಾಮಗಾರಿಗೆ 2019ರಲ್ಲಿ ಕುಮಾರಸ್ವಾಮಿ ಹಣ ಬಿಡುಗಡೆ ಮಾಡಿದ್ದರು. ಈ ಮೂರನೇ ಹಂತದ ಯೋಜನೆ ನಾಲ್ಕು ವರ್ಷಗಳ ಹಿಂದೆ ಪೂರ್ಣಗೊಳ್ಳಬೇಕಿತ್ತು. ಆದರೆ, ಕೆಲವರು ಬೇಕಿಲ್ಲ ಎಂದು ಹೇಳಿ ರೈತರಿಂದ ಅಡ್ಡಿಪಡಿಸಿದರು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನೀರು ಬಿಡಿ, ಆಮೇಲೆ ಶಿಷ್ಟಾಚಾರದ ಪ್ರಕಾರ ಕಾರ್ಯಕ್ರಮ ಮಾಡಿ ಎಂದು ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಹೇಳಿದಾಗ, ಹೋದರೆ ಸಸ್ಪೆಂಡ್ ಮಾಡುತ್ತೇವೆ ಎಂದು ಕೆಲವರು ಹೆದರಿಸಿದರು. ಅದಕ್ಕೆ ನಾನು ನೀವು ಹೋಗಿ, ನಾನು ಪರಿಶೀಲನೆ ಮಾಡುತ್ತೇನೆ ಎಂದು ಅಧಿಕಾರಿಗಳನ್ನು ಕಳುಹಿಸಿದ್ದೆ. ಕಾಲ ಬಂದಾಗ ಈ ಬಗ್ಗೆ ಮಾತನಾಡುತ್ತೇನೆ. ರೈತರಿಗೆ ನೀರು ಪೂರೈಕೆ ಆಗಬೇಕೆಂಬುದು ಮುಖ್ಯ ಎಂದು ಹೇಳಿದ ಅವರು, ಸಂಸದ ಶ್ರೇಯಸ್ ಪಟೇಲ್ ವಿರುದ್ಧ ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದರು.

ಮೊದಲ ಮತ್ತು ಎರಡನೇ ಹಂತದ ಯೋಜನೆಗಳನ್ನು ಸಿದ್ದರಾಮಯ್ಯ ಅವರು ಉದ್ಘಾಟಿಸಿದರು. ನಾನೇನು ಬೇಡ ಎಂದಿಲ್ಲ. 250 ಕೋಟಿ ರೂ. ವೆಚ್ಚದಲ್ಲಿ ನಾನು ಆಸ್ಪತ್ರೆ ಕಟ್ಟಿಸಿದ್ದೆ, ಸಿದ್ದರಾಮಯ್ಯ ಬಂದು ಉದ್ಘಾಟಿಸಿದರು. ನಾನಾದರೋ ಅದಕ್ಕೆ ತಲೆ ಕೆಡಿಸಿಕೊಳ್ಳಲಿಲ್ಲ. ನಮಗೆ ಮುಖ್ಯವಾದುದು ಜಿಲ್ಲೆಯ ಅಭಿವೃದ್ಧಿ ಮತ್ತು ಜನರ ಕೆಲಸ. ದಂಡಿಗನಹಳ್ಳಿ ಹೋಬಳಿಯ ಜನರ ಕನಸಾಗಿದ್ದ ಯೋಜನೆ ಈಗ ಸಾಕಾರಗೊಂಡಿದೆ. ಸರ್ಕಾರ ನಮ್ಮ ಜಿಲ್ಲೆಯ ಅಭಿವೃದ್ಧಿ ಕಾರ್ಯ ಮಾಡಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ ಹಾಗೂ ಸ್ಥಳೀಯ ರೈತರು ಉಪಸ್ಥಿತರಿದ್ದರು.

# ಮಕ್ಕಳ ಭವಿಷ್ಯ ರೂಪಿಸುವಲ್ಲಿ ಅಂಗನವಾಡಿ ಪಾತ್ರ ಮುಖ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಮಕ್ಕಳ ಭವಿಷ್ಯ ರೂಪಿಸುವಲ್ಲಿ ಅಂಗನವಾಡಿ ಕೇಂದ್ರಗಳ ಪಾತ್ರ ಪ್ರಮುಖವಾದುದು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಹುಲಿಕೆರೆ ಗ್ರಾಮದಲ್ಲಿ ತಾಲ್ಲೂಕು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಆಯೋಜಿಸಿದ್ದ ಪೋಷಣ್ ಮಾಸಾಚರಣೆ ಉದ್ಘಾಟಿಸಿ ಮಾತನಾಡಿದರು.

ಅಂಗನವಾಡಿ ಶಿಕ್ಷಕರ ಸೇವೆಯನ್ನು ಪರಿಗಣಿಸಿ ಸಂಬಳ ಹೆಚ್ಚಳ ಮಾಡಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮುಂದಾಗಬೇಕು. ತಾಲ್ಲೂಕಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಉತ್ತಮ ರೀತಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದು ಮಕ್ಕಳು ಹಾಗೂ ಗರ್ಭಿಣಿಯರಲ್ಲಿ ಅಪೌಷ್ಟಿಕತೆ ತಡೆಗಟ್ಟುವ ದೃಷ್ಟಿಯಿಂದ ಅಂಗನವಾಡಿ



ಕೇಂದ್ರಗಳ ಕಾರ್ಯಕರ್ತೆಯರು ಹೆಚ್ಚಿನ ಜವಾಬ್ದಾರಿಯಿಂದ ಕೆಲಸ ನಿರ್ವಹಿಸುತ್ತಿದ್ದಾರೆ. ಅದರಿಂದ ತಾಲ್ಲೂಕಿನಲ್ಲಿ ಅಂತಹ ಪ್ರಕರಣಗಳು ಕಂಡುಬರುತ್ತಿಲ್ಲ ಎಂದು ತಿಳಿಸಿದರು.

ತಾಲ್ಲೂಕಿನಲ್ಲಿ ಸುಮಾರು 400ಕ್ಕೂ ಹೆಚ್ಚು ಅಂಗನವಾಡಿ ಕೇಂದ್ರಗಳಿದ್ದು ಅದರಲ್ಲಿ ಸುಮಾರು 200 ಕೇಂದ್ರಗಳಿಗೆ ಹೊಸ ಕಟ್ಟಡ ನಿರ್ಮಾಣ ಮಾಡಬೇಕಾಗಿದೆ. ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಿಗೆ ಅನುದಾನ ನೀಡುವಂತೆ ಮನವಿ ಮಾಡಲಾಗುವುದು ಎಂದರು. ಕೇಂದ್ರ ಹಾಗೂ ರಾಜ್ಯ ಸರ್ಕಾರ ಗರ್ಭಿಣಿಯರಲ್ಲಿ ಹಾಗೂ ಮಕ್ಕಳಲ್ಲಿ ಅಪೌಷ್ಟಿಕತೆ ಹೋಗಲಾಡಿಸಲು ಪೌಷ್ಟಿಕ ಆಹಾರದ ಕಿಟ್‌ಗಳನ್ನು ಇಲಾಖೆ ವತಿಯಿಂದ ನೀಡಲಾಗುತ್ತಿದೆ. ಅಂಗನವಾಡಿ ಕಾರ್ಯಕರ್ತೆಯರು ವೇತನ ಹೆಚ್ಚಳ ಮಾಡುವಂತೆ ಅನೇಕ ವರ್ಷಗಳಿಂದ ಹೋರಾಟ ಮಾಡುತ್ತಿದ್ದಾರೆ. ಸರ್ಕಾರ ಅವರ ಸೇವೆಯನ್ನು ಪರಿಗಣಿಸಿ ವೇತನ ಹೆಚ್ಚಳ ಮಾಡುವಂತೆ ಒತ್ತಾಯಿಸಿದರು.

ಶಿಶು ಅಭಿವೃದ್ಧಿ ಇಲಾಖೆ ಸಿಡಿಪಿಓ ಇಂದ್ರ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರ ಇಲಾಖೆ ವತಿಯಿಂದ ಮಹಿಳೆಯರು ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆ ಹೋಗಲಾಡಿಸಲು ಹಲವು ಕಾರ್ಯಕ್ರಮ ಹಮ್ಮಿಕೊಂಡಿದೆ. ಅಂಗನವಾಡಿ ಕೇಂದ್ರಗಳ ಮೂಲಕ ಫಲಾನುಭವಿಗಳಿಗೆ ಇಲಾಖೆಯಿಂದ ಸಿಗುವ ಸೌಲಭ್ಯಗಳನ್ನು ತಲುಪಿಸುವ ಕೆಲಸವನ್ನು ಮಾಡಲಾಗುತ್ತಿದೆ. ಬಾಲ್ಯ ವಿವಾಹಗಳನ್ನು ತಡೆಗಟ್ಟುವ ದೃಷ್ಟಿಯಿಂದ ಎಲ್ಲರೂ ಕೈಜೋಡಿಸಿದರೆ ಈ ಪಿಡುಗನ್ನು ತಡೆಗಟ್ಟಬಹುದಾಗಿದೆ ಎಂದರು.

ಕೃಷಿ ಪತ್ತಿನ ಮಾಜಿ ಅಧ್ಯಕ್ಷ ಹಾಲಿ ನಿರ್ದೇಶಕ ಹುಲಿಕೆರೆ ಸಂಪತ್ ಕುಮಾರ್ ಮಾತನಾಡಿ, ಗ್ರಾಮದಲ್ಲಿ ಡೈರಿ ಕಟ್ಟಡ ಹಾಗೂ ಸಮುದಾಯ ಭವನ ಶಾಲೆಯ ಕಟ್ಟಡ ನವೀಕರಣ ಸೇರಿ ಹಲವು ಅಭಿವೃದ್ಧಿ ಕೆಲಸಗಳಿಗೆ ಶಾಸಕರು ಹೆಚ್ಚಿನ ಸಹಕಾರ ನೀಡಿದ್ದಾರೆ. ಗ್ರಾಮದ ಕೆರೆ ತುಂಬಿಸಲು ತೋಟಿ ಏತ ನೀರಾವರಿ ಯೋಜನೆ ಮೂಲಕ ಯೋಜನೆ ರೂಪಿಸಿದ್ದಾರೆ. ಮುಂಬರುವ ದಿನಗಳಲ್ಲೂ ಗ್ರಾಮದ ಅಭಿವೃದ್ಧಿಗೆ ಶಾಸಕರ ಸಹಕಾರ ಹೀಗೆ ಮುಂದುವರೆಯಲಿ ಎಂದರು.

ಪೋಷಣ್ ಮಾಸಾಚರಣೆ ಅಂಗವಾಗಿ ವಿವಿಧ ಬಗೆಯ ತರಕಾರಿ ಹಣ್ಣುಗಳು ಪೌಷ್ಟಿಕ ಆಹಾರಗಳು ಮತ್ತು ವಿವಿಧ ಬಗೆಯ ಸೊಪ್ಪು ಸೇರಿ ವಿವಿಧ ಆಹಾರ ಪದಾರ್ಥಗಳ ಧಾನ್ಯಗಳನ್ನು ಬಳಸಿ ವಿವಿಧ ಬಗೆಯ ಚಿತ್ರಗಳನ್ನು ರಚಿಸಲಾಗಿತ್ತು. ಜೊತೆಗೆ ಗ್ರಾಮದ ಗರ್ಭಿಣಿಯರಿಗೆ ಸೀಮಂತ ಕಾರ್ಯ ನಡೆಯಿತು.

ಕಾರ್ಯಕ್ರಮದಲ್ಲಿ ಡಾ.ರಚಿತಾ, ಗ್ರಾ.ಪಂ ಸದಸ್ಯರಾದ ಆಶಾದೇವಿ ಪ್ರಕಾಶ್, ಹೊನ್ನಮ್ಮ, ಧರಣಿ ಕುಮಾರ್, ಹಿರಿಯಣ್ಣಗೌಡ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೇಲ್ವಿಚಾರಕರಾದ ಮಮತ, ಪಾರ್ವತಮ್ಮ, ಅಂಗನವಾಡಿ ಶಿಕ್ಷಕಿ ಯಶೋಧ, ಮುಖಂಡರಾದ ತೋಪೇಗೌಡ, ದೇವರಾಜ್, ಚಂದ್ರೇಗೌಡ, ಮಹೇಶ್ ಇತರರಿದ್ದರು.

# ನೌಕರರ ಸಂಘಕ್ಕೆ ಶಿವಸ್ವಾಮಿ, ರಘು ನೇಮಕ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ನೂತನ ಪದಾಧಿಕಾರಿಗಳನ್ನು ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ನೇಮಕ ಮಾಡಿದ್ದಾರೆ.

ಜಿಲ್ಲೆಯ ಸಿ.ಎಸ್.ಶಿವಸ್ವಾಮಿ ಅವರನ್ನು ಸಂಘದ ರಾಜ್ಯ ಉಪಾಧ್ಯಕ್ಷ ಮತ್ತು ಸಿ.ಕೆ.ರಘು ಅವರನ್ನು ರಾಜ್ಯ ಕಾರ್ಯದರ್ಶಿ ಸ್ಥಾನಕ್ಕೆ ನೇಮಕ ಆದೇಶ ಹೊರಡಿಸಿದ್ದಾರೆ. ಸಂಘಟನೆ ದೃಷ್ಟಿಯಿಂದ ರಾಜ್ಯಾಧ್ಯಕ್ಷರು ಹಾಸನ ಜಿಲ್ಲೆಗೆ ಎರಡು ಪ್ರಮುಖ ಸ್ಥಾನವನ್ನು ನೀಡುವ ಮೂಲಕ ಸಂಘಟನೆಗೆ ಹೆಚ್ಚಿನ ಹೊತ್ತು ನೀಡಲಾಗಿದೆ.

ಶಿವಸ್ವಾಮಿ ಅವರು ಹಾಸನದ ಚಾಮರಾಜೇಂದ್ರ ಜಿಲ್ಲಾ ಆಸ್ಪತ್ರೆಯ ಪ್ರಯೋಗ ಶಾಲೆಯಲ್ಲಿ ಹಿರಿಯ ತಾಂತ್ರಿಕ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರು ನೌಕರರ ಸಂಘ ಮತ್ತು ಇತರ ಸಂಘಟನೆಗಳಲ್ಲಿ ಸಾಮಾಜಿಕ ಕಾರ್ಯದಲ್ಲಿ ಸಕ್ರಿಯರಾಗಿ ತೊಡಗಿಸಿಕೊಂಡಿದ್ದಾರೆ. ಅದೇ ರೀತಿ ಶ್ರೀರಾಮ್ ನಗರದ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕ ಸಿ.ಕೆ.ರಘು, ಸಂಘ ಹಾಗೂ ಶಿಕ್ಷಕರ ಸಂಘಟನೆಯಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತಿದ್ದಾರೆ. ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ಸೋಮವಾರ ನೂತನವಾಗಿ ನೇಮಕವಾದ ಶಿವ ಸ್ವಾಮಿ ಮತ್ತು ರಘು ಅವರಿಗೆ ಪ್ರಮಾಣ ಪತ್ರವನ್ನು ವಿತರಿಸಿ ಮೂಲಕ ಅವರನ್ನು ಸನ್ಮಾನಿಸಲಾಯಿತು.

# ಹಾಸನಾಂಬ ಜಾತ್ರಾ ಮಹೋತ್ಸವ: ವಸ್ತ್ರ ಸಂಹಿತೆ ಜಾರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಾಸನಾಂಬ ಜಾತ್ರಾ ಮಹೋತ್ಸವದಲ್ಲಿ ವಸ್ತ್ರ ಸಂಹಿತೆ ಜಾರಿಗೊಳಿಸಿ ರಾಜ್ಯ ಸರ್ಕಾರ ಆದೇಶಿಸಿದೆ.

ಕರ್ನಾಟಕ ಹಿಂದು ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಸೆಕ್ಷನ್ 58ರಡಿಯಲ್ಲಿ ದೇವಸ್ಥಾನದ ರೂಢಿ, ಸಂಪ್ರದಾಯ ಮತ್ತು ಆಚರಣೆಯಂತೆ ದೇವಾಲಯದ ಗರ್ಭಗುಡಿ, ಒಳಾಂಗಣ ಮತ್ತು ಹೊರಾಂಗಣದಲ್ಲಿ ಕೆಲಸ ನಿರ್ವಹಿಸುತ್ತಿರುವ ದೇವಾಲಯದ ನೌಕರರು ಮತ್ತು ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ವಸ್ತ್ರ ಸಂಹಿತೆಯನ್ನು ಪಾಲಿಸುವುದು ಸೂಕ್ತವಾಗಿದ್ದು, ಈ ಬಗ್ಗೆ ದಿನಾಂಕ:19.09.2025 ರಂದು ನಡೆದ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆಯಲ್ಲಿ ನಿರ್ಣಯವಾಗಿರುತ್ತದೆ.

ಆದ್ದರಿಂದ, ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಸೆಕ್ಷನ್ 58ರಂತೆ ಹಾಸನ ಜಿಲ್ಲೆ ಹಾಸನ ಟೌನ್ ಶ್ರೀ ಹಾಸನಾಂಬ ದೇವಾಲಯದ ಗರ್ಭಗುಡಿ, ಒಳಾಂಗಣ ಮತ್ತು ಹೊರಾಂಗಣದಲ್ಲಿ ಕೆಲಸ ನಿರ್ವಹಿಸುತ್ತಿರುವ ದೇವಾಲಯದ



ನೌಕರರು ಮತ್ತು ನಿಯೋಜನ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ದೇವಾಲಯದ ಗರ್ಭಗುಡಿಗೆ ಪ್ರವೇಶಿಸಲು ಪುರುಷರು ಪಂಚೆ, ದೋತಿಯಂತಹ ಅಥವಾ ಪೈಜಾಮದಂತಹ ಹಾಗೂ ಮಹಿಳೆಯರು ಸೀರೆ ಮತ್ತು ಚೂಡಿದಾರದಂತಹ ಸಾಂಪ್ರದಾಯಿಕ ಉಡುಗೆಗಳಲ್ಲಿ ಮಾತ್ರ ಅವಕಾಶ ಕಲ್ಪಿಸುವುದು. ಯಾವುದೇ ರೀತಿಯ ಕರ್ತವ್ಯ ನಿರತ ಸಿಬ್ಬಂದಿಗಳು ಸಮವಸ್ತ್ರ ಸಹಿತವಾಗಿ ಗರ್ಭಗುಡಿ ಪ್ರವೇಶಿಸಲು ಅವಕಾಶವಿರುವುದಿಲ್ಲ.

ಜನದಟ್ಟಣೆಯನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸುವ ಉದ್ದೇಶದಿಂದ ಶಿಷ್ಟಾಚಾರ ದರ್ಶನದ ಸಮಯದಲ್ಲಿ ಮಾತ್ರ ಈ ಹಿಂದಿನಂತೆ ಶಿಷ್ಟಾಚಾರದಂತೆ ಗರ್ಭಗುಡಿಗೆ ಪ್ರವೇಶಕ್ಕೆ ಅವಕಾಶ ಕಲ್ಪಿಸುವುದು, ಉಳಿದ ಸಮಯದಲ್ಲಿ ಜಿಲ್ಲಾಧಿಕಾರಿಗಳು ಅಥವಾ ದೇವಾಲಯದ ಆಡಳಿತಾಧಿಕಾರಿಯವರು ಲಿಖಿತ ಅನುಮತಿ ನೀಡಿದಲ್ಲಿ ಮಾತ್ರ ಗರ್ಭಗುಡಿಗೆ ಪ್ರವೇಶಿಸಲು ನಿಯಮಾನುಸಾರ ಅವಕಾಶ ನೀಡಲು ಸೂಚಿಸಿದೆ ಎಂದು ಧಾರ್ಮಿಕ ದತ್ತಿ ಇಲಾಖೆಯ ಆಯುಕ್ತರು ಸೂಚಿಸಿದ್ದಾರೆ.

ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ಧೇಶ್ವರ ಸ್ವಾಮಿ ಜಾತ್ರಾ ಮಹೋತ್ಸ ದಲ್ಲಿ ನಿಯೋಜಿತಗೊಂಡ ಕರ್ತವ್ಯ ನಿರತ ಸಿಬ್ಬಂದಿಗಳು ಮಾನ್ಯ ಆಯುಕ್ತರ ಆದೇಶದಂತೆ ಕ್ರಮವಹಿಸಲು ಸೂಚಿಸಿದ್ದು ಹಾಗೂ ಇಲಾಖಾ ಮುಖ್ಯಸ್ಥರು ನಿಯೋಜಿತ ಸಿಬ್ಬಂದಿಗಳಿಗೆ ಈ ಕುರಿತು ಮಾಹಿತಿ ನೀಡಲು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ ಲತಾ ಕುಮಾರಿ ಅವರು ಆದೇಶಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಅಕ್ಟೋಬರ್-08

1932: ಭಾರತೀಯ ವಾಯುಪಡೆ ಸ್ಥಾಪನೆಗೊಂಡಿತು.

1871: ಅಮೆರಿಕಾದ ಚಿಕಾಗೋ ನಗರದಲ್ಲಿ ಭೀಕರ ಬೆಂಕಿ ಅವಘಡ ಸಂಭವಿಸಿ ಸಾವಿರಾರು ಮನೆಗಳು ಸುಟ್ಟು ನಾಶವಾಗಿದ್ದವು.

1912: ಮೊದಲ ಬಾಲ್ಕನ್ ಯುದ್ಧ ಆರಂಭವಾಯಿತು.

2018: ಟಿಟ್ಲಿ ಚಂಡಮಾರುತ ಒಡಿಶಾ ಮತ್ತು ಆಂಧ್ರ ಪ್ರದೇಶವನ್ನು ದಾಟಿ ಭಾರೀ ನಾಶಮಾಡಿತು.

### ಜನನ

1895: ಜುವಾನ್ ಪೆರೋನ್, ಅರ್ಜೆಂಟಿನಾದ ಅಧ್ಯಕ್ಷ ಹಾಗೂ ಜನಪ್ರಿಯ ನಾಯಕ

1883: ಒಟ್ಟೋ ವಾರ್ಬರ್ಗ್, ಜರ್ಮನ್ ವಿಜ್ಞಾನಿ, ನೊಬೆಲ್ ಪ್ರಶಸ್ತಿ ಪುರಸ್ಕೃತ

1941: ಜೆಸ್ಸಿ ಜ್ಯಾಕ್ಸನ್, ಅಮೆರಿಕಾದ ನಾಗರಿಕ ಹಕ್ಕು ಹೋರಾಟಗಾರ

1970: ಮ್ಯಾಟ್ ಡೇಮನ್, ಅಮೆರಿಕಾದ ನಟ ಹಾಗೂ ಚಲನಚಿತ್ರ ನಿರ್ಮಾಪಕ

1949 ಸಿಗೊನಿರ್ ವೀವರ್, ಹಾಲಿವುಡ್ ನಟಿ

### ನಿಧನ

1936: ಪ್ರೇಮಚಂದ್, ಖ್ಯಾತ ಹಿಂದಿ ಕಥೆಗಾರ ಹಾಗೂ ಕಾದಂಬರಿಕಾರ

1953: ಕ್ಯಾಥ್ಲೀನ್ ಫೆರಿಯರ್, ಬ್ರಿಟಿಷ್ ಸಂಗೀತಗಾರ್ತಿ

1979: ಜಯಪ್ರಕಾಶ್ ನಾರಾಯಣ್, ಭಾರತೀಯ ಸಮಾಜವಾದಿ ನಾಯಕ ಮತ್ತು ಸಂಪೂರ್ಣ ಕ್ರಾಂತಿ ಹೋರಾಟದ ಪ್ರೇರಕ

1982: ಫಿಲಿಪ್ ನೋಯೆಲ್ ಬೇಕರ್, ಬ್ರಿಟಿಷ್ ರಾಜಕಾರಣಿ ಮತ್ತು ಶಾಂತಿ ಚಳವಳಿಯ ಮುಖಂಡ

# ಮನೆ ಬೀಗ ಮುರಿದು ಚಿನ್ನಾಭರಣ ಕಳವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಲಗಾಮೆ ರಸ್ತೆಯ ತಿರುಮಲ ಕಲ್ಯಾಣ ಮಂಟಪದಲ್ಲಿ ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 2.27 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿದ್ದಾರೆ.

ಸೋಮನಾಯ್ಕ ಅವರು ಅ. 5 ರಂದು ಕಾರ್ಯನಿರ್ಮಿತ್ತ ಕುಟುಂಬ ಸಮೇತ ಚನ್ನಗಿರಿಗೆ ತೆರಳಿದ್ದರು. ಸಂಜೆ ವಾಪಾಸ್ ಬಂದು ನೋಡಿದಾಗ ಕಳ್ಳತನವಾಗಿರುವುದು ತಿಳಿದಿದೆ. ಬೀರುವಿನಲ್ಲಿಟ್ಟಿದ್ದ 5 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ, 3 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ, 20 ಗ್ರಾಂ ತೂಕದ ಒಂದು ಜೊತೆ ಚಿನ್ನದ ಬಳೆ, 5 ಗ್ರಾಂ ತೂಕದ 1 ಚಿನ್ನದ ಉಂಗುರ, 4 ಗ್ರಾಂ ತೂಕದ 3 ಚಿನ್ನದ ತಾಳಿ ಗುಂಡು, 5 ಗ್ರಾಂ ತೂಕದ ಚಿನ್ನದ ಮಾಟಿ, 3 ಗ್ರಾಂ ತೂಕದ ಲಕ್ಷ್ಮೀ ತಾಳಿ, 50 ಗ್ರಾಂ ತೂಕದ ಬೆಳ್ಳಿ ಚೊಂಬು ಕದ್ದಿದ್ದಾರೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248